1. 2009–10 ರೂ. 89.00 ಲಕ್ಷಗಳು
2. 2010–11 ರೂ. 20.00 ಲಕ್ಷಗಳು

ಖ) ರಾಜ್ಯ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನದಲ್ಲಿ ಕೈಗೊಂಡಿರುವ ಕಾಮಗಾರಿಗಳ ವಿವರಗಳು ಕೆಳಗಿನಂತಿವೆ:

1. ರೂ. 100.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ನಂದಿ ಬೆಟ್ಟದ ಪ್ರದೇಶದಲ್ಲಿ ಉದ್ಯಾನವನ ಅಭಿವೃದ್ಧಿಪಡಿಸುವ ಯೋಜನೆಗಾಗಿ ಸುವರ್ಣ ಕರ್ನಾಟಕ ಉದ್ಯಾನವನದ ಪ್ರತಿಷ್ಠಾನಕ್ಕೆ ರೂ. 30.00 ಲಕ್ಷಗಳನ್ನು 2009–10ನೇ ಸಾಲಿನಲ್ಲಿ ಬಿಡುಗಡೆ ಮಾಡಲಾಗಿದೆ.
2. ರೂ. 50.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಮುದ್ದೇನಹಳ್ಳಿ ಸರ್ ಎಂ. ವಿಶ್ವೇಶ್ವರನ್ನಯವರು ವಾಸಿಸುತ್ತಿದ್ದ ಮನೆ ದುರಸ್ತಿ ಮತ್ತು ಆವರಣ ಗೋಡೆಯನ್ನು ಮರು ನಿರ್ಮಾಣ ಮಾಡಲಾಗಿದೆ. ರೂ. 14.50 ಲಕ್ಷಗಳಲ್ಲಿ ಶೌಚಾಲಯ ಮತ್ತು ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗಿದೆ.
3. ನಂದಿ ಗ್ರಾಮದಲ್ಲಿ ರೂ. 14.50 ಲಕ್ಷಗಳ ವೆಚ್ಚದಲ್ಲಿ ಉತ್ತಮವಾದ ಕುಡಿಯುವ ನೀರು ಮತ್ತು ಶೌಚಾಲಯ ನಿರ್ಮಿಸಲು ಕರ್ನಾಟಕ ಭೂ ಸೇನಾ ನಿಗಮಕ್ಕೆ ಅನುದಾನ ಬಿಡುಗಡೆ ಮಾಡಲಾಗಿದೆ. ನಿರ್ಮಾಣ ಕಾಮಗಾರಿಯನ್ನು ಎ.ಎಸ್.ಐ. ಅಧಿಕಾರಿಗಳು ಸ್ಥಗಿತಗೊಳಿಸಿರುತ್ತಾರೆ.

ಚಿಕ್ಕಬಳ್ಳಾಪುರ ನಗರ ಸಭೆಗೆ ಯು.ಜಿ.ಡಿ. ಕಾಮಗಾರಿಗೆ ಬಿಡುಗೆಯಾಗಿರುವ ಅನುದಾನ

111 (372) ಬಚ್ಚೇಗೌಡ ಕೆ.ಪಿ. (ಚಿಕ್ಕಬಳ್ಳಾಪುರ): ಮಾನ್ಯ ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲ ಮಂಡಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರ ನಗರ ಸಭೆಗೆ ಕಳೆದ 3 ವರ್ಷಗಳಲ್ಲಿ ಯು.ಜಿ.ಡಿ. ಕಾಮಗಾರಿಗಳಿಗಾಗಿ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನ ಮೊತ್ತವೆಷ್ಟು;

ಆ) ಚಿಕ್ಕಬಳ್ಳಾಪುರ ನಗರ ಸಭೆಗೆ ಕಳೆದ 3 ವರ್ಷಗಳಲ್ಲಿ ಯು.ಜಿ.ಡಿ. ಯೋಜನೆಯಡಿಯಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ; (ಕಾಮಗಾರಿಗಳವಾರು ವಿವರಗಳನ್ನು ನೀಡುವುದು)

ಇ) ಚಿಕ್ಕಬಳ್ಳಾಪುರ ನಗರಸಭೆಗೆ ಕಳೆದ 3 ವರ್ಷಗಳಲ್ಲಿ ಯು.ಜಿ.ಡಿ. ಯೋಜನೆಯಡಿಯಲ್ಲಿ ಕೈಗೊಂಡಿದ್ದ ಕಾಮಗಾರಿಗಳು ಪೂರ್ಣವಾಗಿವೆಯೇ ;

ಈ) ಹಾಗಿಲ್ಲದಿದ್ದಲ್ಲಿ, ಈ ಕಾಮಗಾರಿಗಳು ಪೂರ್ಣಗೊಳ್ಳದಿರಲು ಕಾರಣಗಳೇನು;

ಉ) ಈ ಕಾಮಗಾರಿಗಳು ಪೂರ್ಣಗೊಳ್ಳದಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಊ) ಹಾಗಿದ್ದಲ್ಲಿ, ಈ ತೊಂದರೆಗಳನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲ ಮಂಡಳಿ ಸಚಿವರು):

ಅ) ಚಿಕ್ಕಬಳ್ಳಾಪುರ ನಗರ ಸಭೆಗೆ – ವಿಶ್ವಬ್ಯಾಂಕ್ ಸಾಲದ ಕೆ.ಎಂ.ಆರ್.ಪಿ. ಯೋಜನೆಯಡಿ ಒಳಚರಂಡಿ ಯೋಜನೆ ಮಂಜೂರಾಗಿರುತ್ತದೆ. ಅನುಮೋದನೆಯಾಗಿರುವ ಒಟ್ಟು ಮೊತ್ತ ರೂ. 20.99 ಕೋಟಿ.

ಈವರೆಗೆ ಪ್ರಗತಿಯಲ್ಲಿರುವ ಕಾಮಗಾರಿಗೆ ಬಿಡುಗಡೆಯಾದ ಮೊತ್ತ ರೂ. 10.51 ಕೋಟಿ.

ಆ) ಯು.ಜಿ.ಡಿ. ಯೋಜನೆಯಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳನ್ನು ಹಮ್ಮಿಕೊಳ್ಳಲಾಗಿದೆ.

– ರೊಚ್ಚು ಸಂಸ್ಕರಣ ಘಟಕ	–	10 MLD
– ಮ್ಯಾನ್ ಹೋಲ್‌ಗಳು	–	2618 ಸಂಖ್ಯೆ
– ಟ್ರಂಕ್ ಮೈನ್	–	14 ಕಿ.ಮೀ.
– ಲ್ಯಾಟರಲ್ಸ್/ಪೈಪ್ ಲೈನುಗಳು	–	63 ಕಿ.ಮೀ.

ಇ) ದಿನಾಂಕ 09.03.2010ರಂದು ಕಾರ್ಯಾದೇಶ ನೀಡಿದ್ದು ಕಾಮಗಾರಿ ಪ್ರಗತಿಯಲ್ಲಿರುತ್ತದೆ.

ಈ) ಗುತ್ತಿಗೆ ಕರಾರಿನಂತೆ ಕಾಮಗಾರಿ ಪೂರ್ಣಗೊಳಿಸಲು 18 ತಿಂಗಳುಗಳ ಕಾಲಾವಕಾಶ ನೀಡಿದ್ದು, ದಿನಾಂಕ 09.09.2011ರಂದು ಸದರಿ ಕಾಮಗಾರಿಯನ್ನು ಪೂರ್ಣಗೊಳಿಸಬೇಕಾಗಿರುತ್ತದೆ.

ಉ) ಮತ್ತು ಊ) ಪ್ರಗತಿಯಲ್ಲಿರುವ ಕಾಮಗಾರಿಯು ನಿಗದಿತ ಅವಧಿಯಲ್ಲಿಯೇ ಪೂರ್ಣಗೊಳ್ಳುವ ಸಾಧ್ಯತೆಗಳಿರುತ್ತವೆ ಹಾಗೂ ಸಾರ್ವಜನಿಕರಿಗೆ ತಂದರೆಯಾಗದಂತೆ ಅವಶ್ಯವುಳ್ಳ ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.